# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಕನಕಪುರ

## ಸಿಸಿ ನಂ.447/2013

| | | | |
|---|---|---|---|
| ಚಾಸಾ | **3** | ಪ್ರಾಸಾ | **5** |
| ಹೆಸರು | | ಶ್ರೀನಿವಾಸ | |
| ತಂದೆಯ ಹೆಸರು / ಗಂಡನ ಹೆಸರು | | ತಿಮ್ಮೇಗೌಡ | |
| ವಯಸ್ಸು | | **65** ವರ್ಷಗಳು | |
| ಉದ್ಯೋಗ | | ವ್ಯವಸಾಯ | |
| ವಿಳಾಸ | | ಮುರುಳಿದೊಡ್ಡಿ ಗ್ರಾಮ | |

ದಿನಾಂಕ.**14.07.2025**ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ನನಗೆ ನ್ಯಾಯಾಲಯದ ಮುಂದಿರುವ ಆರೋಪಿತರು ಗೊತ್ತು, ಅವರು ನಮ್ಮ ಊರಿನವರು. ಚಾಸಾ-**2** ನನಗೆ ಗೊತ್ತು. ಚಾಸಾ-**1**, ಚಾಸಾ-**4** ರಿಂದ ಚಾಸಾ-**7** ರವರು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯು ಗುರುತಿಸಿದ ದಾಖಲೆಯು ಸ್ಥಳ ಮತ್ತು ಅಮಾನತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿರುತ್ತದೆ.

ನಿಪಿ-2ಕ್ಕೆ ನಾನು 2012ರಲ್ಲಿ ಗಲಾಟೆಯ ವಿಚಾರಕ್ಕೆ ಸಂಬಂಧಿಸಿದಂತೆ ಪೊಲೀಸರು ಸ್ಥ,ಳಕ್ಕೆ ಬಂದಾಗ ಸಹಿ ಮಾಡಿರುತ್ತೇನೆ. ನಿಪಿ-2 ಕ್ಕೆ ನಾನು ಪೋಲೀಸರ ಕೋರಿಕೆಯ ಮೇರೆಗೆ ಹೆಬ್ಬೆಟಿನ ಸಹಿ ಮಾಡಿರುತ್ತೇನೆ. ನಿಪಿ-2ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-2ಕ್ಕೆ ಆ ದಿನ ನನ್ನೊಂದಿಗೆ ಮತ್ತಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಸ್ಥಳ ಪರಿಶೀಲನೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ . ನಾನು ಯಾವುದೇ ಗಲಾಟೆಯನ್ನು ನೋಡಿರುವುದಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ. ಅವರಿಗೆ ನಾನು ಹೇಳಿಕೆಯನ್ನು ನೀಡಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರವರು ಅನುಮತಿ ಕೋರಿದ್ದು, ಅನುಮತಿಯನ್ನು ನೀಡಲಾಯಿತು.

<u>ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>

ನಿಪಿ**-2**ನ್ನು ದಿನಾಂಕ**.09.05.2012**ರಂದು ಬೆಳಿಗ್ಗೆ **10.00** ರಿಂದ **10.30**ರ ವರೆಗೆ ಬರೆಯಲಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ನಿಪಿ**-2**ಕ್ಕೆ ಆ ದಿನ ನನ್ನೊಂದಿಗೆ ಚಾಸಾ**-1** ಮತ್ತು ಚಾಸಾ**-2** ರವರು ಸಹ ಸಹಿ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

ದಿನಾಂಕ**.09.05.2012**ರಂದು ಪೊಲೀಸರು ಠಾಣಾ ಮೊಕದ್ದಮೆ ಸಂಖ್ಯೆ **121/2012**ರ ವಿಚಾರಕ್ಕೆ ಸಂಬಂಧಿಸಿದಂತೆ ಆರೋಪಿತರ ಮನೆಯ ಬಳಿ ಚಾಸಾ**-1** ರವರಿಗೆ ಹಲ್ಲೆ ಮಾಡಿದ ವಿಚಾರಕ್ಕೆ ಸಂಬಂಧಿಸಿದಂತೆ ಮಹಜರ್ ಮಾಡುವ ಕಾಲಕ್ಕೆ ನನ್ನನ್ನು ಸ್ಥಳಕ್ಕೆ ಕರೆಯಿಸಿ ಘಟನೆಯ ಬಗ್ಗೆ ತಿಳಿಸಿ ನನ್ನ ಸಮಕ್ಷಮ ನಿಪಿ**-2**ರಂತೆ ಮಹಜರ್ ಮಾಡಿರುತ್ತಾರೆ ಎಂದರೆ ಸಾಕ್ಷಿಯು ನನಗೆ ನೆನಪಿಲ್ಲ ಎಂದು ನುಡಿಯುತ್ತಾರೆ. ಆ ದಿನ ಆರೋಪಿತರು ಚಾಸಾ**-1** ರವರನ್ನು ಕಟ್ಟಲು ಉಪಯೋಗಿಸಿದ ಹಗ್ಗ, ಹೊಡೆಯಲು ಉಪಯೋಗಿಸಿದ ಹಿಟ್ಟಿನ ದೊಣ್ಣೆ ಮತ್ತು ಸೀಮೆಎಣ್ಣೆ ಬಾಟಲಿಯನ್ನು ನನ್ನ ಸಮಕ್ಷಮ ಅಮಾನತ್ತುಪಡಿಸಿಕೊಂಡರು ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ಮೇಲಿನ ವಿಚಾರಕ್ಕೆ ಸಂಬಂಧಿಸಿದಂತೆ ನಾನು ಪೊಲೀಸರಿಗೆ ಹೇಳಿಕೆಯನ್ನು ಸಹ ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ**-5** ಎಂದು ಗುರುತಿಸಲಾಯಿತು.

ಆರೋಪಿತರು ನನಗೆ ಪರಿಚಯಸ್ಥರು ಹಾಗೂ ನಮ್ಮ ಊರಿನವರು ಎಂದರೆ ಸರಿ. ಆರೋಪಿತರು ನನಗೆ ಪರಿಚಯಸ್ಥರಾದ ಕಾರಣ ನಿಪಿ**-2** ಮತ್ತು ನಿಪಿ**-5** ರಲ್ಲಿರುವ

ಸಂಗತಿಗಳು ನನಗೆ ಗೊತ್ತಿದ್ದರೂ ನನಗೆ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ- ಆರೋಪಿ ಪರ ವಕೀಲರಾದ ಶ್ರೀ ಕೆಬಿಕೆ ರವರಿಂದಃ-

ಗಲಾಟೆಯು **2012**ರಲ್ಲಿ ನಡೆದಿರುತ್ತದೆ. ದಿನಾಂಕ ಮತ್ತು ತಿಂಗಳು ನನಗೆ ಹೇಳಲು ಬರುವುದಿಲ್ಲ. ಗಲಾಟೆಯಾದ ಸಮಯ ನನಗೆ ಗೊತ್ತಿಲ್ಲ.

ಮರುವಿಚಾರಣೆಃ- ಇಲ್ಲ

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಢೀಕರಿಸುತ್ತೇನೆ.)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**